



ಅರುಣ ಪಿ. ಭಟ್ಟ

## ವಾರಭವಿಷ್ಯ: 22.12.2022ರಿಂದ 28.12.2022ರವರೆಗೆ




ವಾರದ ಆರಂಭದಲ್ಲಿ ವೃತ್ತಿ ಜೀವನದಲ್ಲಿ ಕೀರ್ತಿ ಪ್ರತಿಷ್ಠೆಗಳು ಲಭಿಸುತ್ತವೆ. ಇನ್ನು ಉದ್ಯೋಗಸ್ಥರಿಗೆ ಜವಾಬ್ದಾರಿ ಹೆಚ್ಚಾಗಲಿದೆ. ವೈಯಕ್ತಿಕ ಜೀವನದಲ್ಲೂ ಉತ್ತಮವಾದ ಸಮಯ ಇದು. ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿ ಇರಬೇಕು. ಅದರಲ್ಲೂ ಯಾರ ಜತೆಗೆ ಸ್ನೇಹ ಮಾಡಿದ್ದೀರಿ, ಅವರ ಜತೆ ಹೇಗೆ ಸಮಯ ಕಳೆಯುತ್ತಿದ್ದೀರಿ ಎಂಬ ಬಗ್ಗೆ ಎಚ್ಚರ ಇರಲಿ. ಶುಭದಿನ 26. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ಉನ್ನತ ಶಿಕ್ಷಣ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಇನ್ನು ಮಾಮೂಲಿ ಕೆಲಸ ಕಾರ್ಯಗಳ ಹೊರತಾಗಿ ಇತರ ವಿಚಾರಗಳ ಕಡೆಗೆ ನಿಮ್ಮ ಗಮನ ಹೋಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೇತನದಲ್ಲಿ ಏರಿಕೆಯಾಗುವ ಸಾಧ್ಯತೆ ಇದೆ. ವ್ಯಾಪಾರಸ್ಥರಿಗೆ ಲಾಭವಾಗುತ್ತದೆ. ಶುಭದಿನ 28. ಸೌಂದರ್ಯ ಲಹರಿ ಪಠಿಸಿರಿ.




ವಾರದ ಆರಂಭದಲ್ಲಿ ಕೌಟುಂಬಿಕ ವಿಚಾರದಲ್ಲಿ ಕೆಲವು ಕಷ್ಟಗಳು ಎದುರಾಗಲಿವೆ. ಈಗಾಗಲೇ ಇರುವ ಸಮಸ್ಯೆಗಳ ಜತೆಗೆ ಇದು ಕೂಡ ಸೇರ್ಪಡೆಯಾಗುತ್ತದೆ. ಹೆದರುವ ಅಗತ್ಯ ಇಲ್ಲ. ನಿಮ್ಮ ಪ್ರಯತ್ನ ಭವಿಷ್ಯದ ಯಶಸ್ಸಿಗೆ ಸಹಕಾರಿ ಆಗಿರುತ್ತದೆ. ಸಂಗಾತಿ ಜತೆಗೆ ನಡೆಸುವ ಮಾತುಕತೆ ಉದ್ವಿಗ್ನತೆಗೆ ಕಾರಣವಾಗಬಹುದು. ಆದ್ದರಿಂದ ಎಚ್ಚರಿಕೆಯಿಂದ ವ್ಯವಹರಿಸಬೇಕು. ಶುಭದಿನ 26. ಹನುಮಾನ್ ಚಾಲಿಸ್ ಓದಿರಿ.




ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸಂತಸ ಇರುತ್ತದೆ. ಸಂಗಾತಿ ಜತೆ ಉತ್ತಮ ಬಾಂಧವ್ಯ ಇರಲಿದೆ. ಉದ್ಯೋಗ, ವ್ಯಾಪಾರ ಕ್ಷೇತ್ರದಲ್ಲಿ ಯಶಸ್ಸು ಪಡೆಯಲು ಸಾಕಷ್ಟು ಅವಕಾಶಗಳು ದೊರೆಯಲಿವೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಇದರಿಂದ ಸಂತೋಷ ಹೆಚ್ಚಲಿದೆ. ವಾರದ ಅಂತ್ಯಕ್ಕೆ ಕುಟುಂಬದವರ ನಡವಳಿಕೆಯಿಂದ ಗೊಂದಲಕ್ಕೆ ಸಿಲುಕಿಕೊಳ್ಳುತ್ತೀರಿ. ಶುಭದಿನ 25. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ಉದ್ಯೋಗ ನಿಮಿತ್ತ ಈ ಅವಧಿಯಲ್ಲಿ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಸೃಷ್ಟಿಯಾಗಬಹುದು. ಇನ್ನು ಆದ್ಯತೆ ಮೇಲೆ ಕೆಲಸ ಕಾರ್ಯಗಳನ್ನು ಪೂರೈಸುವುದಕ್ಕೆ ನಿರ್ಧಾರ ಮಾಡುತ್ತೀರಿ. ಈ ತೀರ್ಮಾನದಿಂದ ಭವಿಷ್ಯದಲ್ಲಿ ಅನುಕೂಲವಾಗಲಿದೆ. ಆಹಾರ ನೀರು ಸೇವನೆ ಬಗ್ಗೆ ಹೆಚ್ಚು ಲಕ್ಷ್ಯ ಇರಲಿ. ಹಿರಿಯರಿಗೆ ಮಂಡಿ ನೋವು ಕಾಣಿಸಿಕೊಳ್ಳಬಹುದು. ಶುಭದಿನ 23. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಮಕ್ಕಳ ಪ್ರಗತಿಯಿಂದ ಸಂತಸ. ಹೆಮ್ಮೆ ಉಂಟಾಗುತ್ತದೆ. ಶಿಕ್ಷಣ, ಉದ್ಯೋಗ, ಭವಿಷ್ಯದ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಈ ಪೈಕಿ ಯಾವುದಾದರೂ ಉದ್ದೇಶ ಈಡೇರಲು ಮನೆಯನ್ನು ಬದಲಿಸುವ ಸಾಧ್ಯತೆ ಕೂಡ ಇದೆ. ಇನ್ನು ವಿದ್ಯಾರ್ಥಿಗಳಿಗೆ ಶಿಕ್ಷಣದಲ್ಲಿ ಯಶಸ್ಸು ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಆದಾಯ ಅತ್ಯುತ್ತಮವಾಗಿ ಇರುತ್ತದೆ. ಶುಭದಿನ 25. ವಿಷ್ಣು ಸಹಸ್ರನಾಮ ಪಠಿಸಿರಿ.




ಉದ್ಯಮಿಗಳು ವ್ಯಾಪಾರಸ್ಥರಿಗೆ ಉತ್ತಮ ಸಮಯ ಇದು. ಇದರಿಂದ ಸಂತಸ ಉಂಟಾಗಲಿದೆ. ಈ ಅವಧಿಯಲ್ಲಿ ಆರೋಗ್ಯವೂ ಉತ್ತಮವಾಗಿರುತ್ತದೆ. ಉದ್ಯೋಗಿಗಳಿಗೆ ದೊರೆಯುತ್ತಿರುವ ಸವಲತ್ತು ಮತ್ತಷ್ಟು ವಿಸ್ತರಣೆಯಾಗಲಿದೆ. ಆದಾಯ ಹೆಚ್ಚು ಮಾಡಿಕೊಳ್ಳುವುದಕ್ಕೂ ಅತ್ಯುತ್ತಮವಾದ ಸಮಯ ಇದು. ಹಣಕಾಸಿನ ವೆಚ್ಚ ಹೆಚ್ಚಾಗಿರುತ್ತದೆ. ಶುಭದಿನ 24. ಲಿಂಗಾಷ್ಟಕ ಪಠಿಸಿರಿ.




ವಾರದ ಶುರುವಿನಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಲಿದೆ. ಕೌಟುಂಬಿಕ ಜೀವನದಲ್ಲೂ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಮಾಹಿತಿ ಹಾಗೂ ಸಂವಹನ ಕ್ಷೇತ್ರದಲ್ಲಿ ಇರುವವರಿಗೆ ಗೌರವ ಹೆಚ್ಚಾಗಲಿದೆ. ಜತೆಗೆ ಯಶಸ್ಸು ನಿಮ್ಮ ಪಾಲಿಗೆ ಸಿಗಲಿದೆ. ಹಿರಿಯರಿಗೆ ಆರೋಗ್ಯ ಸಮಸ್ಯೆಗಳು ಕಾಡಬಹುದು. ಆದರೆ ವಾರಾಂತ್ಯದ ಹೊತ್ತಿಗೆ ಚೇತರಿಕೆ ಕಾಣಿಸಿಕೊಳ್ಳಲಿದೆ. ಆದಾಯದಲ್ಲಿ ಹೆಚ್ಚಳವಾಗಲಿದೆ. ಶುಭದಿನ 26. ಚಂಡಿ ಪಾರಾಯಣ ಮಾಡಿರಿ.




ವಾರದ ಶುರುವಿನಲ್ಲಿ ಭೂಮಿ ಖರೀದಿ ಪ್ರಕ್ರಿಯೆಯಲ್ಲಿ ತೊಡಗಲಿದ್ದೀರಿ. ಈಗಾಗಲೇ ವ್ಯಾಜ್ಯಗಳು ಇದ್ದಲ್ಲಿ ಅವುಗಳನ್ನು ನಿವಾರಿಸಿಕೊಳ್ಳಲು ಸಫಲರಾಗುತ್ತೀರಿ. ವಾಸ್ತವದಲ್ಲಿ ಸಂತೋಷ ಪಡುವುದಕ್ಕೆ ಬೇಕಾದ ಸೌಕರ್ಯಗಳನ್ನು ಪಡೆಯಲಿದ್ದೀರಿ. ಕೆಲವು ಕೆಲಸಗಳನ್ನು ಪೂರ್ಣ ಮಾಡಬೇಕಾದ ಅನಿವಾರ್ಯಕ್ಕೆ ಸಿಲುಕಿಕೊಳ್ಳಬಹುದು. ಶುಭದಿನ 27. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.




ವಾರದ ಶುರುವಿನಲ್ಲಿ ವೃತ್ತಿ ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಬಳಸುವ ಕಡೆಗೆ ನಿಮ್ಮ ಗಮನ ಇರುತ್ತದೆ. ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ಆ ಮೂಲಕ ನಿಮ್ಮ ಈಗಿನ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಅನುಕೂಲ ಆಗಲಿದೆ. ಭೂಮಿ ಖರೀದಿ ಬಗ್ಗೆ ಆಸಕ್ತರಾಗಿದ್ದಲ್ಲಿ ಇದು ಸೂಕ್ತ ಸಮಯ. ದೈಹಿಕ ಬಾಧೆಗಳು ನಿಮ್ಮನ್ನು ಕಾಡಬಹುದು. ಶುಭದಿನ 28. ನವದುರ್ಗಾ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನೀವು ಅಂದುಕೊಂಡ ಕೆಲಸಗಳನ್ನು ಶುರು ಮಾಡುವುದಕ್ಕೆ ಸೂಕ್ತವಾದ ಸಮಯ. ನಿಮ್ಮ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಅಗತ್ಯವಾದ ವೇದಿಕೆಯನ್ನು ಸಿದ್ಧ ಮಾಡಿಕೊಳ್ಳುತ್ತೀರಿ. ನಿಮ್ಮ ವಿವೇಚನಾಶಕ್ತಿ ಹಾಗೂ ಧೈರ್ಯ ಅಗಾಧ ಪ್ರಮಾಣದಲ್ಲಿ ಹೆಚ್ಚಲಿದೆ. ಆರೋಗ್ಯ ಸಮಸ್ಯೆಗಳು ಸ್ವಲ್ಪ ಮಟ್ಟಿಗೆ ಕಾಡಬಹುದು. ಶುಭದಿನ 24. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲಿ ಕೆಲಸ ಕಾರ್ಯಗಳನ್ನು ಪೂರೈಸಲು ಉದ್ಯೋಗ ಸ್ಥಳದಲ್ಲಿ ಶ್ರಮಿಸಲಿದ್ದೀರಿ. ಆ ನಿಮ್ಮ ಶ್ರಮಕ್ಕೆ ತಕ್ಕಂತೆ ಫಲಿತಾಂಶ ದೊರೆಯಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವಾರದ ಮಧ್ಯ ಭಾಗದಲ್ಲಿ ಸಣ್ಣ ಪುಟ್ಟ ವಿಚಾರಗಳಿಗೂ ಬಿಕ್ಕಟ್ಟು ಎದುರಾಗಲಿದೆ. ಶುಭದಿನ 26. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.